ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ 04-12-2023 ರಂದು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ ಕೆ ಆರ್ ಡಿ ನ್ಯಾಯವಾದಿರವರಿಂದಃ

ನಾನು ಸಲ್ಲಿಸುತ್ತಿರುವ ಪ್ರಮಾಣ ಪತ್ರದಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಪಹಣಿಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-1 ಎಂದು, ನಗರಸಭೆ ಆಯುಕ್ತರು ಕಾರವಾರ ಇವರಿಗೆ ವಕೀಲರ ಮೂಲಕ ಕಳುಹಿಸಿದ ನೋಟೀಸನ ಕಚೇರಿಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-2 ಎಂದು, ಪೌರಾಯುಕ್ತರು ನಗರಸಭೆ ಇವರಿಗೆ ಸಹಾಯಕ ಆಯುಕ್ತರು ಕಾರವಾರ ಉಪವಿಭಾಗ ಇವರು ನೀಡಿದ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-3 ಎಂದು, ವಾದಿಗೆ ಪೌರಾಯುಕ್ತರು ನಗರಸಭೆ ಇವರು ನೀಡಿದ ನೋಟೀಸ ಮತ್ತು ದಾಖಲೆಗಳನ್ನು ಒಟ್ಟಾಗಿ ಹಾಜರುಪಡಿಸಿದ್ದು, ಅದನ್ನು ನಿ.ಡಿ-4 ಎಂದು, ಗೌರವಾನ್ವಿತ ಉಚ್ಚ ನ್ಯಾಯಾಲಯ ಕರ್ನಾಟಕ ಧಾರವಾಡ ಪೀಠ ರ WA ಸಂಖ್ಯೆ 100112 ರಲ್ಲಿನ ಆದೇಶ ಮತ್ತು WP ಸಂಖ್ಯೆ 101077/2017 ರಲ್ಲಿನ ಆದೇಶವನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಡಿ-5 ಮತ್ತು ನಿ.ಡಿ-6 ಎಂದು, ಲೋಕಾಯುಕ್ತ ಪ್ರಕರಣ ಸಂಖ್ಯೆ ENQ 432/2016 ರಲ್ಲಿ ದಿಃ 24-05-2017 ರಂದು ಆರ್ ಎಸ್ ಪಾಟೀಲ್ ಇವರು ನೀಡಿದ ಸಾಕ್ಷಿ ಹೇಳಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-7 ಎಂದು, WA 100266/2018 ರಲ್ಲಿ ಗೌರವಾನ್ವಿತ ಉಚ್ಚ ನ್ಯಾಯಾಲಯ ಕರ್ನಾಟಕ ಧಾರವಾಡ ಪೀಠ ಇವರ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-8 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪ್ರತಿವಾದಿ ಪರ ನ್ಯಾಯಾವಾದಿರವರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ .**

**ಸಿವಿಲ್ ನ್ಯಾಯಾಧೀಶರು ಕಾರವಾರ**